ಕರ್ನಾಟಕ ವಿಧಾನಸಭೆ

ಹದಿಮೂರನೇ ವಿಧಾನಸಭೆ

(ಹನ್ನೆರಡನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 6ನೇ ಫೆಬ್ರವರಿ, 2012

(ಸಮಯ: ಬೆಳಿಗ್ಗೆ 11.00 ಗಂಟೆಗೆ)

-- --

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೇ ಪಟ್ಟಿ

2. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಎನ್. ಸಂಪಂಗಿ ಅವರು ಡಾ|| ನಂಜುಂಡಪ್ಪರವರ ವರದಿಯ ಪ್ರಕಾರ ಅತ್ಯಂತ ಹಿಂದುಳಿದ ಪ್ರದೇಶವೆಂದು ಪರಿಗಣಿಸಲ್ಪಟ್ಟಿರುವ ಬಾಗೇಪಲ್ಲಿ ಮತ್ತು ಗುಡಿಬಂಡೆ ಎರಡು ತಾಲ್ಲೂಕುಗಳಲ್ಲೂ 100 ಹಾಸಿಗೆಯುಳ್ಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದ್ದು, ಈ ಕಟ್ಟಡದ ಕಾಮಗಾರಿ ಶೇ.80 ರಷ್ಟು ಮುಗಿದಿದ್ದರೂ ಅಗತ್ಯ ಸೌಲಭ್ಯ ಒದಗಿಸದೆ ರೋಗಿಗಳು ತೊಂದರೆಗೊಳಗಾಗಿದ್ದು, ರೋಗಿಗಳಿಗೆ ಮಧ್ಯಾಹ್ನದ ಊಟದ ವ್ಯವಸ್ಥೆಯು ಇಲ್ಲದೇ ಅನಾನುಕೂಲವಾಗಿರುವ ಬಗ್ಗೆ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

2. ಶ್ರೀ ಯು.ಟಿ. ಖಾದರ್ ಅವರು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇತ್ತೀಚೆಗೆ ಕೆಲವು ವ್ಯಕ್ತಿಗಳು ವಿನಾಕಾರಣ ಅಲ್ಪಸಂಖ್ಯಾತರನ್ನು ಗುರಿಯಾಗಿಸಿಕೊಂಡು ಪ್ರಚೋದನಕಾರಿ ಭಾಷಣದ ಮೂಲಕ ಸಮಾಜದಲ್ಲಿ ಅಶಾಂತಿಯನ್ನು ಉಂಟುಮಾಡುತ್ತಿರುವುದರ ಜೊತೆಗೆ ಕಾನೂನು – ಸುವ್ಯವಸ್ಥೆಗೆ ಭಂಗವಾಗುವ ರೀತಿಯಲ್ಲಿ ವರ್ತಿಸುತ್ತಿರುವ ಬಗ್ಗೆ ಗೃಹ ಮತ್ತು ಸಾರಿಗೆ ಸಚಿವರ ಗಮನ ಸೆಳೆಯುವುದು.

3. ಶ್ರೀ ಆರ್. ನರೇಂದ್ರ ಅವರು ದಿನಾಂಕ: 23.01.2012 ರಂದು ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲ್ಲೂಕು ಬೋಳೇಗೌಡನ ದೊಡ್ಡಿ ಗ್ರಾಮದಲ್ಲಿ ಐದು ಜನ ಒಂದೇ ಕುಟುಂಬದ ಸದಸ್ಯರು ಕೃಷಿ ಸಾಲದಿಂದಾಗಿ ಬೇಸತ್ತು ಸಾಮೂಹಿಕವಾಗಿ ಆತ್ಮಹತ್ಯೆ ಮಾಡಿಕೊಂಡಿದ್ದು ಹಾಗೂ ಆ ಕುಟುಂಬದಲ್ಲಿ ಉಳಿದಿರುವ ಏಕೈಕ ಸದಸ್ಯನಾದ ಅವರ ಮಗನಿಗೆ ಸರ್ಕಾರದಿಂದ ಅವರ ಸಾಲ ತೀರಿಸಲು ಹಾಗೂ ಜೀವನಕ್ಕೆ ಪರಿಹಾರ ನೀಡುವ ಬಗ್ಗೆ ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.

4. ಶ್ರೀ ಹೆಚ್.ಡಿ ರೇವಣ್ಣ ಅವರು ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಮೂರು ಮತ್ತು ನಾಲ್ಕನೇ ಹಂತದ ಕಟ್ಟಡ ಕಾಮಗಾರಿಗೆ 2009–10 ನೇ ಸಾಲಿನಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿದ್ದು ಈ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡದಿರುವುದರಿಂದ ಹಾಗೂ ಎಂ.ಸಿ.ಐ. ನಿಯಮಾನುಸಾರ ಇಲ್ಲದಿರುವುದರಿಂದ ಮಾನ್ಯತೆ ರದ್ದಾಗುವ ಸಂಭವವಿರುವುದರ ಬಗ್ಗೆ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

5. ಶ್ರೀ ಹೆಚ್.ಡಿ. ರೇವಣ್ಣ ಅವರು ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಶ್ರೀ ಜಯಚಾಮರಾಜೇಂದ್ರ ಆಸ್ಪತ್ರೆಯನ್ನು 350 ಹಾಸಿಗೆಯಿಂದ 750 ಹಾಸಿಗೆಗೆ ಮೇಲ್ದರ್ಜೆಗೇರಿಸಿದ್ದು, ಪರಿಷ್ಕೃತ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಅನುದಾನ ಬಿಡುಗಡೆ ಮಾಡದಿರುವುದರಿಂದ ಹಾಗೂ ಎಂ.ಸಿ.ಐ. ನಿಯಮಾನುಸಾರ ಇಲ್ಲದಿರುವುದರಿಂದ ಮಾನ್ಯತೆ ರದ್ದು ಮಾಡುವ ಸಂಭವವಿರುವುದರ ಬಗ್ಗೆ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

6. ಶ್ರೀ ಸಿದ್ಧರಾಮಯ್ಯ ಅವರು ಬೆಂಗಳೂರಿನ ಗಾಂಧಿಬಜಾರ್ ಮುಖ್ಯ ರಸ್ತೆಯಲ್ಲಿರುವ ಮಾರುಕಟ್ಟೆಯಲ್ಲಿ ವೃದ್ಧರೂ ಸೇರಿದಂತೆ ಸುಮಾರು 200ಕ್ಕೂ ಹೆಚ್ಚು ಬಡವ್ಯಾಪಾರಸ್ಥರು ಕಳೆದ 50 ವರ್ಷದಿಂದ ಹೂ ಹಣ್ಣು ಮತ್ತು ತರಕಾರಿ ವ್ಯಾಪಾರ ಮಾಡಿಕೊಂಡು ಜೀವನ ನಡೆಸುತ್ತಿದ್ದು, ದಿನಾಂಕ 23.01.2012ರಂದು ಮಧ್ಯರಾತ್ರಿ ಏಕಾಏಕಿ ಪೋಲೀಸ್ ಅಧಿಕಾರಿಗಳು ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆವತಿಯಿಂದ ಯಾವುದೇ ಸೂಚನೆ ಇಲ್ಲದೇ ಎಲ್ಲಾ ಅಂಗಡಿಗಳನ್ನು ನೆಲಸಮ ಮಾಡಿ ಸಾಮಾನುಗಳನ್ನು ತುಂಬಿಕೊಂಡು ಹೋಗಿರುವುದರಿಂದ ಮತ್ತು ಸದರಿ ಮಾರುಕಟ್ಟೆ ಸ್ಥಳವನ್ನು ಬೇರೆಯವರಿಗೆ ಪರಭಾರೆ ಮಾಡಿರುವುದರಿಂದ ಬಡ ವ್ಯಾಪಾರಸ್ಥರು ಬೀದಿ ಪಾಲಾಗಿರುವ ಬಗ್ಗೆ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

3. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರಾದ ಸಿದ್ದರಾಮಯ್ಯ, ಟಿ.ಬಿ. ಜಯಚಂದ್ರ, ವಿ.ಶ್ರೀನಿವಾಸಪ್ರಸಾದ್, ಡಾ: ಹೆಚ್.ಸಿ. ಮಹಾದೇವಪ್ಪ, ರಾಜಶೇಖರ ಪಾಟೀಲ್ ಹಾಗೂ ಇತರರು ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆ ಮತ್ತು ಅಕ್ರಮವಾಗಿ ಕಬ್ಬಿಣದ ಅದಿರನ್ನು ರಫ್ತು ಮಾಡಿರುವ ಬಗ್ಗೆ ಲೋಕಾಯುಕ್ತವು ಸರ್ಕಾರಕ್ಕೆ ಅಂತಿಮ ವರದಿಯನ್ನು ಸಲ್ಲಿಸಿದ್ದು ಸದರಿ ಗಣಿಗಾರಿಕೆಯಲ್ಲಿ ರಾಜಕಾರಣಿಗಳು ಹಾಗೂ ಅಧಿಕಾರಿಗಳು ಶಾಮೀಲಾಗಿದ್ದು ಸಾವಿರಾರು ಕೋಟಿ ರೂಪಾಯಿ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗಿರುವುದಾಗಿ ವರದಿಯಲ್ಲಿ ತಿಳಿಸಿದ್ದು, ಸದರಿ ವರದಿಯಲ್ಲಿನ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

ಮು.ತಿ.ನೋ.

2. ಶ್ರೀಯುತರಾದ ಹೆಚ್.ಡಿ. ರೇವಣ್ಣ, ಸಿ.ಎಸ್. ಪುಟ್ಟೇಗೌಡ, ಎಂ.ಟಿ. ಕೃಷ್ಣಪ್ಪ, ವೆಂಕಟರಾವ್ ನಾಡಗೌಡ ಮತ್ತು ಸುನೀಲ ವಿ ಹೆಗ್ಗಡೆ ಹಾಗೂ ಇತರರು ರಾಜ್ಯ ಸರ್ಕಾರ ಈಗಾಗಲೇ ನೂರು ತಾಲ್ಲೂಕುಗಳನ್ನು ಬರಗಾಲ ಪ್ರದೇಶವೆಂದು ಘೋಷಿಸಿರುವುದು ಹಾಗೂ ಬರಗಾಲ ಪ್ರದೇಶದಲ್ಲಿ ರೈತರು ಬೆಳೆದ ಬೆಳೆಗಳು ನಾಶವಾಗಿದ್ದು ಹಾಗೂ ರೈತರು ಬೆಳೆದ ಬೆಳೆಗಳ ಬೆಲೆಗಳು ಕುಸಿದಿರುವುದರಿಂದ ರೈತರು ಭಾರಿ ನಷ್ಟವನ್ನು ಅನುಭವಿಸುತ್ತಿದ್ದು, ಇದರಿಂದಾಗಿ ರೈತರು ಆತ್ಮಹತ್ಯೆಗೆ ಶರಣಾಗುತ್ತಿರುವುದರಿಂದ ಉಂಟಾಗಿರುವ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

4. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2012ರ ಜನವರಿ 30ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ"ಎಂದು ಮಾನ್ಯ ಸದಸ್ಯರಾದ ಶ್ರೀ ಡಿ.ಎನ್. ಜೀವರಾಜ್ ಅವರು ದಿನಾಂಕ 2012ರ ಫೆಬ್ರವರಿ 3ರಂದು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರಿದ ಚರ್ಚೆ.

5. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) ಸಹ್ಯಾದ್ರಿ ಪರಂಪರೆ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2011
ಶ್ರೀ ಗೋವಿಂದ ಎಂ. ಕಾರಜೋಳ, (ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:–

ಅ) ಸಹ್ಯಾದ್ರಿ ಪರಂಪರೆ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2) ಕರ್ನಾಟಕ ಪೌರಸಭೆಗಳು ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2011
ಶ್ರೀ ಎಸ್. ಸುರೇಶ್ ಕುಮಾರ್, (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ನಗರಾಭಿವೃದ್ಧಿ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) ಅವರು:–

ಅ) ಕರ್ನಾಟಕ ಪೌರಸಭೆಗಳು ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N